# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **30**

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 05.03.2025

| | ಪ್ರಶ್ನೆ | ಉತ್ತರ |
|---|---|---|
| ಅ. | ಸಾರಿಗೆ ಕಛೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ಮಿತಿ ಮೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಮಧ್ಯವರ್ತಿಗಳನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ದಿನಾಂಕ:01-11-2021 ರಿಂದ ಸಾರಿಗೆ ಇಲಾಖೆಯಲ್ಲಿನ **ನಲವತ್ತೈದು** ಸೇವೆಗಳನ್ನು ಆನ್‌ಲೈನ್ ಮತ್ತು ಸಂಪರ್ಕರಹಿತ ಸೇವೆಗಳಾಗಿ ನಿರ್ವಹಿಸಲು ಅನುಷ್ಠಾನಗೊಳಿಸಲಾಗಿದ್ದು, ಬಹುತೇಕ ಸೇವೆಗಳಿಗೆ ಸಾರ್ವಜನಿಕರು ಕಚೇರಿಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.<br>ಅಲ್ಲದೆ, ಸಾರ್ವಜನಿಕರು ಮಧ್ಯವರ್ತಿಗಳನ್ನು ಸಂಪರ್ಕಿಸದೇ ನೇರವಾಗಿ ಕಛೇರಿಯ ಅಧಿಕಾರಿ / ಸಿಬ್ಬಂದಿಯವರನ್ನು ಭೇಟಿ ಮಾಡಿ ಅವರ ಕೆಲಸಗಳನ್ನು ಮಾಡಿಸಿಕೊಳ್ಳಬೇಕೆಂದು ಕಛೇರಿಯ ಆವರಣದಲ್ಲಿ ಸೂಚನಾ ಫಲಕಗಳನ್ನು ಹಾಕಲಾಗಿದೆ.<br>ಸಾರ್ವಜನಿಕರಿಗೆ ಅವರುಗಳ ಚಾಲನಾ ಅನುಜ್ಞಾ ಪತ್ರ ಮತ್ತು ವಾಹನ ನೋಂದಣಿಯ ಸ್ಮಾರ್ಟ್ ಕಾರ್ಡ್‌ಗಳನ್ನು ಅವರ ಮನೆಯ ವಿಳಾಸಗಳಿಗೆ ಅಂಚೆ ಸೇವೆಯ ಮೂಲಕ ತಲುಪಿಸಲಾಗುತ್ತಿದೆ. ರಾಜ್ಯದಲ್ಲಿ ವಾಹನ್-4, ಸಾರಥಿ-4 ಮತ್ತು ಇ-ಪೇಮೆಂಟ್ ಆಫ್ ಟ್ಯಾಕ್ಸ್ ನಂತಹ ಆನ್‌ಲೈನ್ ಸೇವೆಗಳನ್ನು ಇಲಾಖೆಯ ಎಲ್ಲಾ ಕಛೇರಿಗಳಲ್ಲಿ ಜಾರಿಗೆ ತರಲಾಗಿದೆ ಹಾಗೂ ಸಾರ್ವಜನಿಕರು ಕರ್ನಾಟಕ-1, ಬೆಂಗಳೂರು-1 ಮತ್ತು ಮೊಬೈಲ್-1 ಎಂಬ ಆ್ಯಪ್‌ಗಳಲ್ಲಿ ವಾಹನ ವಿವರ / ಮಾಹಿತಿಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ. | ಕಳೆದ 02 ವರ್ಷಗಳಲ್ಲಿ ಬೆಂಗಳೂರು ನಗರದ ಎಷ್ಟು ಸಾರಿಗೆ ಅಧಿಕಾರಿಗಳನ್ನು ಭ್ರಷ್ಟಾಚಾರ ಆರೋಪದ ಪ್ರಕರಣಕ್ಕೆ ಅಮಾನತ್ತು ಮಾಡಿ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲಾಗಿದೆ; (ಹೆಸರಿನೊಂದಿಗೆ ವಿವರ ನೀಡುವುದು) | ಯಾವುದೇ ಪ್ರಕರಣಗಳು ಇರುವುದಿಲ್ಲ. |

| | ಪ್ರಶ್ನೆ | ಉತ್ತರ |
|---|---|---|
| ಇ. | ಕಳೆದ 02 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸಾರಿಗೆ ಕಛೇರಿಗಳ ಮೇಲೆ ಎ.ಸಿ.ಬಿ., ದಾಳಿಯಾಗಿದೆ; ಈ ದಾಳಿಯಲ್ಲಿ ಸಿಕ್ಕಿ ಹಾಕಿಕೊಂಡಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; | ಕಳೆದ 02 ವರ್ಷಗಳಲ್ಲಿ ರಾಜ್ಯದಲ್ಲಿ 05 ಸಾರಿಗೆ ಕಛೇರಿಗಳ ಮೇಲೆ ಎ.ಸಿ.ಬಿ., [ಪ್ರಸ್ತುತ: ಲೋಕಾಯುಕ್ತ] ದಾಳಿಯಾಗಿದೆ. ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |
| ಈ. | ಹೆಚ್.ಎಸ್.ಆರ್. ಲೇಔಟ್‌ನಲ್ಲಿರುವ ಬೆಂಗಳೂರು KA 1 RTO ಕಛೇರಿಗೆ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದಾರೆ? (ಭೇಟಿ ನೀಡಿದ ದಿನಾಂಕ ಮತ್ತು ಅಧಿಕಾರಿಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು) | ಹೆಚ್.ಎಸ್.ಆರ್. ಲೇಔಟ್‌ನಲ್ಲಿರುವ ಬೆಂಗಳೂರು KA 1 RTO ಕಛೇರಿಗೆ ಕಳೆದ ಎರಡು ವರ್ಷಗಳಲ್ಲಿ ಇಲಾಖೆಯ ಇಬ್ಬರು ಹಿರಿಯ ಅಧಿಕಾರಿಗಳು 6 ಬಾರಿ ಭೇಟಿ ನೀಡಿದ್ದು ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |

**ಟಿಡಿ 3 ಟಿಡಿಕ್ಯೂ 2025**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.

**ಮಾನ್ಯ ವಿಧಾನ ಸದಸ್ಯರಾದ ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:30 ಕ್ಕೆ ಅನುಬಂಧ-1**

| ಕ್ರ. ಸಂ. | ದಾಳಿಗೊಳಗಾದ ಅಧಿಕಾರಿ / ನೌಕರರ ಹೆಸರು ಮತ್ತು ಪದನಾಮ | ತೆಗೆದುಕೊಂಡಿರುವ ಕ್ರಮ | ಷರಾ |
|---|---|---|---|
| 1 | ಶ್ರೀ ಚಂದ್ರುಕಾಂತ್ ಗುಡಿಮನಿ,<br>ಅಧೀಕ್ಷಕರು,<br>ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಬಳ್ಳಾರಿ. | ಸದರಿಯವರ ವಿರುದ್ಧದ ಲೋಕಾಯುಕ್ತ ಪ್ರಕರಣದಲ್ಲಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಹುದ್ದೆಯ ಲೀನ್ ಅನ್ನು ಚಿಕ್ಕಮಗಳೂರು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗೆ ಸ್ಥಳಾಂತರಿಸಲಾಗಿರುತ್ತದೆ.<br><br>ಮಾನ್ಯ ಲೋಕಾಯುಕ್ತರವರಿಂದ ಅಂತಿಮ ವರದಿಯನ್ನು ನಿರೀಕ್ಷಿಸಲಾಗುತ್ತಿದ್ದು, ವರದಿ ಬಂದ ನಂತರ ನಿಯಮಾನುಸಾರ ಕ್ರಮ ವಹಿಸಲಾಗುವುದು. | ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಕೆ.ಎಸ್.ಎ.ಟಿ, ಬೆಳಗಾವಿ ಪೀಠವು ಹೊರಡಿಸಿರುವ ಆದೇಶದ ಹಿನ್ನೆಲೆಯಲ್ಲಿ, ಸದರಿಯವರನ್ನು ಸೇವೆಗೆ ಪುನರ್ ನೇಮಕ ಮಾಡಿ ಹುದ್ದೆಯ ಲೀನ್ ಅನ್ನು ಪ್ರಾ.ಸಾ.ಕ, ನೆಲಮಂಗಲ ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ. |
| 2 | ಶ್ರೀ ರಚಿತ್‌ರಾಜ್,<br>ದ್ವಿತೀಯ ದರ್ಜೆ ಸಹಾಯಕರು,<br>ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ರಾಮನಗರ. | ಸದರಿಯವರ ವಿರುದ್ಧದ ಲೋಕಾಯುಕ್ತ ಪ್ರಕರಣದ ಹಿನ್ನೆಲೆಯಲ್ಲಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಹುದ್ದೆಯ ಲೀನ್ ಅನ್ನು ದಾಂಡೇಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗೆ ಸ್ಥಳಾಂತರಿಸಲಾಗಿರುತ್ತದೆ.<br><br>ಮಾನ್ಯ ಲೋಕಾಯುಕ್ತರವರಿಂದ ಅಂತಿಮ ವರದಿಯನ್ನು ನಿರೀಕ್ಷಿಸಲಾಗುತ್ತಿದ್ದು, ವರದಿ ಬಂದ ನಂತರ ನಿಯಮಾನುಸಾರ ಕ್ರಮ ವಹಿಸಲಾಗುವುದು. | ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಸದರಿಯವರ ಅಮಾನತ್ತಿನ ಅವಧಿಯು ಆರು (6) ತಿಂಗಳು ಮೀರಿದ್ದರಿಂದ ಹಾಗೂ ಇಲಾಖಾ ವಿಚಾರಣೆ ಪ್ರಾರಂಭವಾಗದ ಕಾರಣ, ಇವರನ್ನು ಸೇವೆಗೆ ಪುನರ್ ನೇಮಕ ಮಾಡಿ ಕರ್ನಾಟಕ ರಾಜ್ಯ ಸಾರಿಗೆ ಮೇಲ್ಮನವಿ ನ್ಯಾಯಾಧೀಕರಣ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ. |
| 3 | ಶ್ರೀ ಎನ್. ನಾಗೇಶ್ ಕುಮಾರ್,<br>ಪ್ರಥಮ ದರ್ಜೆ ಸಹಾಯಕರು,<br>ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಬಳ್ಳಾರಿ. | ಸದರಿಯವರ ವಿರುದ್ಧದ ಲೋಕಾಯುಕ್ತ ಪ್ರಕರಣದ ಹಿನ್ನೆಲೆಯಲ್ಲಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಹುದ್ದೆಯ ಲೀನ್ ಅನ್ನು ಜಂಟಿ ಸಾರಿಗೆ ಆಯುಕ್ತರ ಕಛೇರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ.<br><br>ಮಾನ್ಯ ಲೋಕಾಯುಕ್ತರವರಿಂದ ಅಂತಿಮ ವರದಿಯನ್ನು ನಿರೀಕ್ಷಿಸಲಾಗುತ್ತಿದ್ದು, ವರದಿ ಬಂದ ನಂತರ ನಿಯಮಾನುಸಾರ ಕ್ರಮ ವಹಿಸಲಾಗುವುದು. | ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಕೆ.ಎಸ್.ಎ.ಟಿ, ಬೆಳಗಾವಿ ಪೀಠವು ಹೊರಡಿಸಿರುವ ಆದೇಶದ ಹಿನ್ನೆಲೆಯಲ್ಲಿ, ಸದರಿಯವರನ್ನು ಸೇವೆಗೆ ಪುನರ್ ನೇಮಕ ಮಾಡಿ ಹುದ್ದೆಯ ಲೀನ್ ಅನ್ನು ಪ್ರಾ.ಸಾ.ಕ, ಕೊಪ್ಪಳ ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ. |

--2

| | | | |
|---|---|---|---|
| 4 | ಶ್ರೀಮತಿ ಆರ್. ಲತಾ, ಗ್ರೂಪ್ ಡಿ ನೌಕರರು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಚಿಕ್ಕಮಗಳೂರು. | ಸದರಿಯವರ ವಿರುದ್ಧದ ಲೋಕಾಯುಕ್ತ ಪ್ರಕರಣದ ಹಿನ್ನೆಲೆಯಲ್ಲಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಹುದ್ದೆಯ ಲೀನ್ ಅನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಪುತ್ತೂರು ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ.<br><br>ಸದರಿಯವರು ಎಸಗಿರುವ ಅಪರಾಧಕ್ಕಾಗಿ ಘನ ನ್ಯಾಯಾಲಯದಲ್ಲಿ ಅಭಿಯೋಜನೆಗೆ ಒಳಪಡಿಸಲು ಮಾನ್ಯ ಲೋಕಾಯುಕ್ತರವರಿಗೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. | ಸದರಿಯವರನ್ನು ಸೇವೆಗೆ ಪುನರ್ ನೇಮಕ ಮಾಡಿ ಹುದ್ದೆಯ ಲೀನ್ ಅನ್ನು ಸ.ಪ್ರಾ.ಸಾ.ಕ, ತರೀಕೆರೆ ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ. |
| 5 | ಶ್ರೀ ವೆಂಕಟೇಶ್ ವಿ., ಪ್ರಥಮ ದರ್ಜೆ ಸಹಾಯಕರು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಶಾಂತಿನಗರ, ಬೆಂಗಳೂರು. | ಸದರಿಯವರ ವಿರುದ್ಧದ ಲೋಕಾಯುಕ್ತ ಪ್ರಕರಣದ ಹಿನ್ನೆಲೆಯಲ್ಲಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಹುದ್ದೆಯ ಲೀನ್ ಅನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ನೆಲಮಂಗಲ ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ. | - |

**ಮಾನ್ಯ ವಿಧಾನ ಸದಸ್ಯರಾದ ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:30 ಕ್ಕೆ ಅನುಬಂಧ-2**

| **ಕ್ರ. ಸಂ.** | **ಹಿರಿಯ ಅಧಿಕಾರಿಗಳ ಹೆಸರು (ಶ್ರೀ/ ಶ್ರೀಮತಿ)** | **ಪದನಾಮ** | **ಕಛೇರಿಗೆ ಭೇಟಿ ನೀಡಿದ ದಿನಾಂಕ** |
|---|---|---|---|
| 1 | ಶ್ರೀ ಕೆ.ಟಿ. ಹಾಲಸ್ವಾಮಿ | ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು (ನಗರ). | 26-06-2023 |
| 2 | ಶ್ರೀಮತಿ ಎಂ. ಶೋಭ | ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು (ನಗರ). | 05-07-2023 |
| 3 | ಶ್ರೀಮತಿ ಎಂ. ಶೋಭ | ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು (ನಗರ). | 19-12-2023 |
| 4 | ಶ್ರೀಮತಿ ಎಂ. ಶೋಭ | ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು (ನಗರ). | 03-05-2024 |
| 5 | ಶ್ರೀಮತಿ ಎಂ. ಶೋಭ | ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು (ನಗರ). | 18-09-2024 |
| 6 | ಶ್ರೀಮತಿ ಎಂ. ಶೋಭ | ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು (ನಗರ). | 02-12-2024 |